**Akashvani: Bangalore**
**Regional Bulletin In Kannada**
**10.09.2026: 14.30hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**ಮುಖ್ಯಾಂಶಗಳು**

1. ರಾಜ್ಯದಲ್ಲಿ ೫ ಲಕ್ಷ ನಿವೇಶನ ಹಂಚಿಕೆ ಆದೇಶಕ್ಕೆ ದೃಢ ಕರ್ನಾಟಕ ಸಂಕಲ್ಪ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸಹಿ
2. ರಫ್ತು ಗುಣಮಟ್ಟದ ಉತ್ಪನ್ನಗಳನ್ನು ತಯಾರಿಸಲು ಉದ್ದಿಮೆಗಳಿಗೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಕರೆ
3. ಕರ್ನಾಟಕ - ಕೆನಡಾ ನಡುವಿನ ಸಹಕಾರ ಬಲವರ್ಧನೆಗೆ ಮಾತುಕತೆ - ಸಚಿವ ಪ್ರಿಯಾಂಕ್ ಖರ್ಗೆ
4. ರಾಜ್ಯ ಸರ್ಕಾರದಿಂದ ಜನಪರ ಕೆಲಸ ನಡೆದಿಲ್ಲ - ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆರೋಪ

******

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ಸರ್ಕಾರ ೧೦೦ ದಿನ ಪೂರೈಸಿದ ಹಿನ್ನೆಲೆಯಲ್ಲಿ ಬೆಂಗಳೂರಿನ ವಿಧಾನಸೌಧದಲ್ಲಿಂದು ದೃಢ ಕರ್ನಾಟಕ ಸಂಕಲ್ಪ ಕಾರ್ಯಕ್ರಮ ನಡೆಯಿತು. ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಸೇವಾ ಒನ್, ರೈತ ಚೈತನ್ಯ ಯೋಜನೆ, ಶಾಲೆಗಳಿಗೆ ಸಿ ಎಸ್ ಆರ್ ಪೋರ್ಟಲ್, ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್, ಬಿಎಂಟಿಸಿ ಆಪ್, ಒನ್ ಕರ್ನಾಟಕ ಮೊಬಿಲಿಟಿ ಆಪ್, Retrofit Emission Control Device (RECD) ಅಳವಡಿಕೆ ಯೋಜನೆಗಳಿಗೆ ಚಾಲನೆ ನೀಡಿದರು. ಇದೇ ಸಂದರ್ಭದಲ್ಲಿ ನಿವೇಶನ ರಹಿತರಿಗೆ ೫ ಲಕ್ಷ ನಿವೇಶನ ಹಂಚಿಕೆ ಯೋಜನೆ ಹಾಗೂ ಸೈನಿಕ ಸಮ್ಮಾನ ಯೋಜನೆ ಆದೇಶಕ್ಕೆ ಸಹಿ ಮಾಡಿದರು ಕಾರ್ಯಕ್ರಮದಲ್ಲಿ ನಿಕಟಪೂರ್ವ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಜಿ ಪರಮೇಶ್ವರ್ ಪಾಲ್ಗೊಂಡಿದ್ದರು. ಕಾರ್ಯಕ್ರಮದ ಆರಂಭಕ್ಕೂ ಮುನ್ನ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರು ವಿವಿಧ ಯೋಜನೆಗಳ ಫಲಾನುಭವಿಗಳ ಕುಶಲೋಪರಿ ವಿಚಾರಿಸಿದರು.

******

ಉದ್ದಿಮೆಗಳು ರಫ್ತು ಗುಣಮಟ್ಟದ ಉತ್ಪನ್ನಗಳನ್ನು ತಯಾರಿಸಬೇಕು ಎಂದು ಕೇಂದ್ರ ಅತಿಸಣ್ಣ, ಸಣ್ಣ ಹಾಗೂ ಮಧ್ಯಮ ಗಾತ್ರದ ಉದ್ದಿಮೆಗಳ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಕರೆ ನೀಡಿದ್ದಾರೆ.ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿಯ ಕೆಐಎಡಿಬಿ ಕೈಗಾರಿಕಾ ಪ್ರದೇಶದಲ್ಲಿ ೧೫೭ ಕೋಟಿ ರೂಪಾಯಿ ವೆಚ್ಚದಲ್ಲಿ ಸ್ಥಾಪಿಸಿರುವ ಎಂಎಸ್‌ಎಂಇ ಟೆಕ್ನಾಲಜಿ ಸೆಂಟರ್ ಉದ್ಘಾಟಿಸಿ ಅವರು ಮಾತನಾಡಿದರು. ದೇಶದಲ್ಲಿ ಕೃಷಿ ನಂತರ ಎಂಎಸ್‌ಎಂಇ ವಲಯದಲ್ಲಿ ೪೨ ಕೋಟಿ ಉದ್ಯೋಗವಕಾಶಗಳಿವೆ. ಈ ನಿಟ್ಟಿನಲ್ಲಿ ಇಂದಿನ ಆಧುನಿಕ ತಂತ್ರಜ್ಞಾನಗಳಿಗೆ ಪೂರಕವಾಗಿ ಕೌಶಲ್ಯಯುಕ್ತ ಶಿಕ್ಷಣ ಹಾಗೂ ತರಬೇತಿ ನೀಡಿ, ಯುವ ಜನರನ್ನು ಉದ್ಯೋಗಕ್ಕೆ ಸಜ್ಜುಗೊಳಿಸಲು ಕೇಂದ್ರ ಸರ್ಕಾರ, ಅತಿಸಣ್ಣ, ಸಣ್ಣ, ಮಧ್ಯಮ ಉದ್ದಿಮೆಗಳ ಇಲಾಖೆಯ ಮೂಲಕ ತಾಂತ್ರಿಕ ತರಬೇತಿ ಕೇಂದ್ರಗಳನ್ನು ಸ್ಥಾಪಿಸುತ್ತಿದೆ ಎಂದರು.

ಪ್ರಧಾನಿ ನರೇಂದ್ರ ಮೋದಿ ಅವರ ಆಶಯದಂತೆ ಆಮದು ಕಡಿಮೆ ಮಾಡಿ, ದೇಶದಲ್ಲಿ ತಾಂತ್ರಿಕಾಧಾರಿತ ಉತ್ಪನ್ನಗಳು ತಯಾರಾಗಬೇಕು. ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಅಗತ್ಯ ನೆರವು ಹಾಗೂ ಮಾರ್ಗದರ್ಶನ ನೀಡುತ್ತಿದೆ. ಇಂದು ಬೆಂಗಳೂರು ಏರೋಸ್ಪೇಸ್ ಹಬ್ ಆಗಿದೆ. ಆಟಿಕೆಗಳಿಂದ ಚಂದ್ರಯಾನದವರೆಗೆ ಬೇಕಾದ ಎಲ್ಲಾ ಉತ್ಪನ್ನಗಳು ಇಲ್ಲಿಯೇ ತಯಾರಾಗಬೇಕಿದ್ದು, ಎಂಎಸ್‌ಎಂಇ ವತಿಯಿಂದ ಕೇಂದ್ರ ಸರ್ಕಾರ ತರಬೇತಿ ನೀಡುತ್ತಿದೆ. ಬೆಳಗಾವಿ, ಹುಬ್ಬಳ್ಳಿಯಲ್ಲಿ ರೋಬೋಟಿಕ್ಸ್, ಎಐ ತಾಂತ್ರಿಕ ತರಬೇತಿ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಇಂತಹ ತರಬೇತಿ ಕೇಂದ್ರಗಳನ್ನು ಇಂದಿನ ವಿದ್ಯಾರ್ಥಿಗಳು ಸದುಪಯೋಗಪಡಿಸಿಕೊಳ್ಳಬೇಕಿದೆ ಎಂದು ಸಚಿವೆ ತಿಳಿಸಿದರು.

******

ಉಪಲೋಕಾಯುಕ್ತ ಬಿ.ವೀರಪ್ಪ, ಇಂದು ಮಂಡ್ಯ ಜಿಲ್ಲೆಯ ನಾಗಮಂಗಲ ತಾಲೂಕು ಕಚೇರಿಗೆ ಭೇಟಿ ನೀಡಿ, ವಿವಿಧ ಇಲಾಖೆಗಳ ಕಡತಗಳು ಹಾಗೂ ಸಾರ್ವಜನಿಕ ಸೇವೆಗಳ ಕುರಿತು ಪರಿಶೀಲನೆ ನಡೆಸಿದರು. ತಾಲ್ಲೂಕಿನಲ್ಲಿ ಸುಮಾರು ೪೦೦ ಪಡಿತರ ಚೀಟಿಗಳ ಅರ್ಜಿಗಳು ಬಾಕಿ ಉಳಿದಿರುವುದನ್ನು ಗಮನಿಸಿದ ಉಪಲೋಕಾಯುಕ್ತರು, ಅರ್ಜಿಗಳನ್ನು ಶೀಘ್ರವಾಗಿ ವಿಲೇವಾರಿ ಮಾಡಿ ಅರ್ಹ ಫಲಾನುಭವಿಗಳಿಗೆ ಪಡಿತರ ಚೀಟಿ ದೊರೆಯುವಂತೆ ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು. ತಾಲೂಕಿನಲ್ಲಿ ೯೫ ನ್ಯಾಯಬೆಲೆ ಅಂಗಡಿಗಳಿದ್ದು, ೪೫ ಅಂಗಡಿಗಳ ವಿರುದ್ಧ ದೂರುಗಳು ಬಂದಿರುವ ಹಿನ್ನೆಲೆಯಲ್ಲಿ ಅಧಿಕಾರಿಗಳು ಖುದ್ದಾಗಿ ನ್ಯಾಯಬೆಲೆ ಅಂಗಡಿಗಳಿಗೆ ಭೇಟಿ ನೀಡಿ, ಅಲ್ಲಿನ ಸಮಸ್ಯೆಗಳನ್ನು ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ನಿರ್ದೇಶನ ನೀಡಿದರು. ಇದೇ ವೇಳೆ ತಾಲ್ಲೂಕು ಕಚೇರಿಯಲ್ಲಿ ಸುಮಾರು ೫೦೦ ಕಡತಗಳು ಬಾಕಿ ಉಳಿದಿರುವ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದ ಅವರು, ಬಾಕಿ ಕಡತಗಳನ್ನು ಪರಿಶೀಲಿಸಿ ಸಾರ್ವಜನಿಕರಿಗೆ

ಸಂಬಂಧಿಸಿದ ಸಮಸ್ಯೆಗಳನ್ನು ಆದ್ಯತೆಯ ಮೇರೆಗೆ ಶೀಘ್ರ ಪರಿಹರಿಸಬೇಕು ಎಂದು ತಿಳಿಸಿದರು. ಸಾರ್ವಜನಿಕರ ಕೆಲಸಗಳನ್ನು ವಿಳಂಬ ಮಾಡದೆ ನಿಗದಿತ ಅವಧಿಯಲ್ಲಿ ವಿಲೇವಾರಿ ಮಾಡಬೇಕು. ಆಡಳಿತದಲ್ಲಿ ಪಾರದರ್ಶಕತೆ ಹಾಗೂ ವೇಗಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಉಪಲೋಕಾಯುಕ್ತರು ಅಧಿಕಾರಿಗಳಿಗೆ ಸೂಚಿಸಿದರು.

******

ಕರ್ನಾಟಕ ಹಾಗೂ ಕೆನಡಾ ನಡುವಿನ ತಂತ್ರಜ್ಞಾನ ಸಹಕಾರ ಬಲಗೊಳಿಸುವ ನಿಟ್ಟಿನಲ್ಲಿ ಮಾಹಿತಿ ತಂತ್ರಜ್ಞಾನ ಖಾತೆ ಸಚಿವ ಪ್ರಿಯಾಂಕ್ ಖರ್ಗೆ, ಬೆಂಗಳೂರಿನ ಕೆನಡಾ ಕೌನ್ಸುಲ್ ಜನರಲ್ ಆಗಿ ಹೊಸದಾಗಿ ನೇಮಕಗೊಂಡ ರಯಾನ್ ವಾರ್ಡ್ ಅವರೊಂದಿಗೆ ಮಾತುಕತೆ ನಡೆಸಿದರು. ಮಾತುಕತೆ ಸೌಹಾರ್ದವಾಗಿತ್ತು ಹಾಗೂ ಮುಂದಿನ ತಿಂಗಳು ಕೆನಡಾದ ವಾಣಿಜ್ಯ ನಿಯೋಗ ಭಾರತಕ್ಕೆ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಈ ಭೇಟಿ ಮಹತ್ವದ್ದಾಗಿದೆ ಎಂದು ಸಚಿವ ಖರ್ಗೆ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ. ಕೆನಡಾ ವಾಣಿಜ್ಯ ನಿಯೋಗ, ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಸಂಶೋಧನೆಯಲ್ಲಿ ಬಂಡವಾಳ ಹೂಡಿಕೆಗೆ ಅವಕಾಶ, ಔದ್ಯಮಿಕ ಸಹಭಾಗಿತ್ವ ಮೊದಲಾದ ಬಗ್ಗೆ ಚರ್ಚಿಸುವ ನಿರೀಕ್ಷೆ ಇದೆ. ಇದಲ್ಲದೆ, ಚೀನಾದ ಪ್ರಮುಖ ಸ್ಮಾರ್ಟ್‌ಫೋನ್ ತಯಾರಕಾ ಕಂಪನಿ ಜಿಯೋಮಿ ಪ್ರತಿನಿಧಿಗಳ ತಂಡ ತಮ್ಮನ್ನು ಭೇಟಿ ಮಾಡಿ, ರಾಜ್ಯದಲ್ಲಿ ಭವಿಷ್ಯದ ಬಂಡವಾಳ ಹೂಡಿಕೆ ಬಗ್ಗೆ ಚರ್ಚೆ ನಡೆಸಿತು ಎಂದು ಸಚಿವ ಪ್ರಿಯಾಂಕ್ ಖರ್ಗೆ ಮಾಹಿತಿ ನೀಡಿದ್ದಾರೆ. ವಿದ್ಯುನ್ಮಾನ ವಸ್ತುಗಳ ತಯಾರಿಕೆ, ಬಂಡವಾಳ ಹೂಡಿಕೆಗಾಗಿ ಸ್ಥಳೀಯ ಪರಿಸರ ಬಲಪಡಿಸುವ ಬಗ್ಗೆ ಚರ್ಚಿಸಲಾಯಿತೆಂದು ಅವರು ತಿಳಿಸಿದ್ದಾರೆ.

******

ಯುವಜನರ ಭವಿಷ್ಯವನ್ನು ಕತ್ತಲೆಗೆ ತಳ್ಳುವ ಮಾದಕ ವಸ್ತುಗಳ ಜಾಲವನ್ನು ಮಟ್ಟಹಾಕಲು ಸರ್ಕಾರ ನಿರಂತರ ಪ್ರಯತ್ನ ನಡೆಸಿದೆ ಎಂದು ಗೃಹ ಖಾತೆಯನ್ನೂ ಹೊಂದಿರುವ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ. ಬೆಂಗಳೂರು ಪೊಲೀಸರು ನಡೆಸಿದ ಮಹತ್ವದ ಕಾರ್ಯಾಚರಣೆಯಲ್ಲಿ ಸುಮಾರು ೨೪ ಕೋಟಿ ರೂಪಾಯಿ ಮೌಲ್ಯದ ಮಾದಕವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ. ಕಾರ್ಯಾಚರಣೆಯಲ್ಲಿ ೫ ಮಂದಿ ಆರೋಪಿಗಳನ್ನು ಬಂಧಿಸಲಾಗಿದೆ. ಮಾದಕ ವಸ್ತುಗಳ ಮಾರಾಟ, ಸಾಗಣೆ ಹಾಗೂ ಜಾಲದ ವಿರುದ್ಧ ಕಠಿಣ ಕ್ರಮ ಮುಂದುವರಿಯಲಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಪುನರುಚ್ಚರಿಸಿದ್ದಾರೆ.

******

ರಾಜ್ಯದಲ್ಲಿ ಅಧಿಕಾರದಲ್ಲಿರುವ ಕಾಂಗ್ರೆಸ್ ಸರ್ಕಾರ, ಜನಪರ ಕೆಲಸಗಳನ್ನು ಮಾಡುತ್ತಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆಪಾದಿಸಿದ್ದಾರೆ. ಅವರು ಬಳ್ಳಾರಿ ಚಲೋ ಪಾದಯಾತ್ರೆಯ ಸಮಾರೋಪ ಸಮಾವೇಶಕ್ಕೂ ಮುನ್ನ ಮಾಧ್ಯಮಗಳೊಂದಿಗೆ ಮಾತನಾಡುತ್ತಿದ್ದರು. ನೂರು ದಿನಗಳ ಸರ್ಕಾರದ ಸಾಧನೆ ಶೂನ್ಯ ಎಂದು ಟೀಕಿಸಿದ ಅವರು, ಕೇವಲ ಜಾಹಿರಾತುಗಳಲ್ಲಿ ಮಾತ್ರ ಸಾಧನೆ ಕಂಡುಬರುತ್ತಿದೆ ಎಂದು ಆರೋಪಿಸಿದರು. ರಾಜ್ಯ ಸರ್ಕಾರದ ವಿರುದ್ಧ ಭಾರತೀಯ ಜನತಾ ಪಾರ್ಟಿ ನಡೆಸುತ್ತಿರುವ ಹೋರಾಟ ಮುಂದುವರಿಯಲಿದೆ ಎಂದು ವಿಜಯೇಂದ್ರ ಹೇಳಿದರು. ವಿಧಾನಪರಿಷತ್‌ನ ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ರಾಜ್ಯ ಸರ್ಕಾರ ಉತ್ತಮ ಆಡಳಿತ ನೀಡುತ್ತಿಲ್ಲ ಎಂದು ಟೀಕಿಸಿದರು.

******

ಹಾವೇರಿ ಜಿಲ್ಲೆಯ ಸರ್ಕಾರಿ ಶಾಲೆಗಳಲ್ಲಿ ೨೦೨೬-೨೭ನೇ ಸಾಲಿನಲ್ಲಿ ೧೮೪ ಎಲ್‌ಕೆಜಿ ಮತ್ತು ಯುಕೆಜಿ ತರಗತಿಗಳನ್ನು ಆರಂಭಿಸಲಾಗುತ್ತಿದ್ದು, ಆಂಗ್ಲ ಮಾಧ್ಯಮದ ಶಿಕ್ಷಣಕ್ಕೆ ಅವಕಾಶ ಕಲ್ಪಿಸಲಾಗುತ್ತಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ರುದ್ರಪ್ಪ ಲಮಾಣಿ ಹೇಳಿದ್ದಾರೆ. ಹಾವೇರಿಯಲ್ಲಿಂದು ಸುದ್ದಿಗಾರೊಂದಿಗೆ ಮಾತನಾಡಿದ ಅವರು, ಜಿಲ್ಲೆಯಲ್ಲಿರುವ ೪೫ ಕರ್ನಾಟಕ ಪಬ್ಲಿಕ್ ಸ್ಕೂಲ್‌ಗಳನ್ನು, ಕಾರ್ಪೊರೇಟ್ ಕಂಪನಿಗಳ ಸಾಮಾಜಿಕ ಜವಾಬ್ದಾರಿ ನಿಧಿಯಡಿ ಅಭಿವೃದ್ಧಿಪಡಿಸಲಾಗುತ್ತಿದೆ. ಸಿಎಸ್‌ಆರ್ ಅನುದಾನ ನೀಡುವುದಾಗಿ ಹೇಳಿರುವ ಕಂಪನಿಗಳು, ಕೊಟ್ಟ ಮಾತಿನಂತೆ ನಡೆದುಕೊಂಡು ಶಾಲೆಗಳ ಅಭಿವೃದ್ಧಿಗೆ ಸಹಕರಿಸಬೇಕು. ಇಲ್ಲವಾದರೆ, ಸರ್ಕಾರದ ಮಟ್ಟದಲ್ಲಿ ಅಗತ್ಯ ಕ್ರಮ ಕೈಗೊಳ್ಳಲು ಶಿಫಾರಸು ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದರು.

******

ಪಶ್ಚಿಮ ಬಂಗಾಳದ ಮಾಣಿಕ್‌ಪರ ವಿವೇಕಾನಂದ ವಿದ್ಯಾಪೀಠ, ಬೆಂಗಳೂರಿನ ಜಾಲಹಳ್ಳಿ ವಾಯುಪಡೆ ಮೈದಾನದಲ್ಲಿ ನಡೆದ ೧೫ ವರ್ಷ ಒಳಗಿನ ಬಾಲಕರ ಅಂತಾರಾಷ್ಟ್ರೀಯ ಸುಬ್ರೋತೊ ಫುಟ್ಬಾಲ್ ಕಪ್ ಗೆದ್ದುಕೊಂಡಿದೆ. ನಿನ್ನೆ ನಡೆದ ಅಂತಿಮ ಪಂದ್ಯದಲ್ಲಿ ಮಾಣಿಕ್‌ಪರ ವಿವೇಕಾನಂದ ವಿದ್ಯಾಪೀಠ, ಅಸ್ಸಾಂನ ಕಾಮರೂಪ್ ಮೆಟ್ರೋ ಪಾಲಿಟನ್ ಸೀನಿಯರ್ ಸೆಕೆಂಡರಿ ಸ್ಕೂಲ್‌ಅನ್ನು ೧-೦ ಅಂತರದಿಂದ ಪರಾಭವಗೊಳಿಸಿತು. ಪಂದ್ಯದಲ್ಲಿ ಶ್ರೀಲಂಕಾ ತಂಡ ಸೇರಿದಂತೆ ಒಟ್ಟು ೩೨ ತಂಡಗಳು ಭಾಗವಹಿಸಿದ್ದವು. ತರಬೇತಿ ಕಮಾಂಡ್‌ನ ಏರ್ ಮಾರ್ಷಲ್ ಎಸ್. ಶ್ರೀನಿವಾಸ್, ಪ್ರಶಸ್ತಿ ಪ್ರದಾನ ಸಮಾರಂಭದ ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದರು. ವಿಜೇತ ತಂಡಕ್ಕೆ ೪ ಲಕ್ಷ ರೂಪಾಯಿ, ರನ್ಸ್ ಅಪ್ ತಂಡಕ್ಕೆ ೨ ಲಕ್ಷ ರೂಪಾಯಿ ಬಹುಮಾನ ವಿತರಿಸಲಾಯಿತು. ಅಸ್ಸಾಂ ತಂಡದ ರಾಜಿ ತ್ಯಾಂಗ್‌ಸಾಂಗ್, ಪಂದ್ಯಾವಳಿಯ ಅತ್ಯುತ್ತಮ ಆಟಗಾರ ಪ್ರಶಸ್ತಿಗೆ ಪಾತ್ರರಾದರು.

***END***